# ಬಾಷ್ ಜತೆಗೆ ಎನ್ಐಟಿಕೆ ಒಪ್ಪಂದ

**ಸುರತ್ಕಲ್, ಅ. 19:** ಎನ್ಐಟಿಕೆಯ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್ ವಿಭಾಗವು ಉದ್ದಿಮೆ ಪ್ರಾಯೋಜಿತ ಸ್ನಾತಕೋತ್ತರ ಪದವಿಯನ್ನು ಪ್ರಾರಂಭಿಸಲು ಎನ್ಐಟಿಕೆ ಸುರತ್ಕಲ್ ಮತ್ತು ಬಾಷ್ ಗ್ಲೋಬಲ್ ಸಾಫ್ಟ್‌ವೇರ್ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್ ಬೆಂಗಳೂರು ಇದರೊಂದಿಗೆ ಇತ್ತೀಚೆಗೆ ಒಪ್ಪಂದಕ್ಕೆ ಸಹಿ ಹಾಕಿದೆ.

ಇದು ಎನ್ಐಟಿಕೆ ಸುರತ್ಕಲ್‌ನ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್ ವಿಭಾಗವು ನೀಡುವ ಎರಡನೇ ಸ್ನಾತಕೋತ್ತರ ಪದವಿಯ ವಿಭಾಗವಾಗಿದೆ. ಸ್ನಾತಕೋತ್ತರ ಪದವಿಯೊಂದಿಗೆ ವಿದ್ಯಾರ್ಥಿಗಳಿಗೆ ಬೇರೊಂದು ಕೋರ್ಸನ್ನು ಕಲಿಯಲು ಅವಕಾಶ ಮಾಡಿಕೊಡಲಿದೆ. ಬೆಂಗಳೂರಿನ ಬಾಷ್ ಗ್ಲೋಬಲ್ ಸಾಫ್ಟ್ ವೇರ್ ಟೆಕ್ನಾಲಜೀಸ್ ಪ್ರೈವೇಟ್ ಲಿಮಿ ಟೆಡ್‌ನೊಂದಿಗೆ ಸಮಾಲೋಚಿಸಿ ವಿನ್ಯಾಸಗೊಳಿಸಲಾದ ಈ ಕಾರ್ಯಕ್ರಮವು ಪವರ್ ಎಲೆಕ್ಟ್ರಾನಿಕ್ಸ್ ಮತ್ತು ಕಂಟ್ರೋಲ್ ಫಾರ್ ಎಲೆಕ್ಟ್ರಿಕ್ ವೆಹಿಕಲ್‌ನ ಪ್ರಮುಖ ವಿಷಯಗಳನ್ನು ಒಳಗೊಂಡ ಬಲವಾದ ಸೈದ್ಧಾಂತಿಕ ಮತ್ತು ಪ್ರಯೋಗಾಲಯ ಕೋರ್ಸ್‌ಗಳನ್ನು ಒಳಗೊಂಡಿದೆ. ಸ್ನಾತಕೋತ್ತರ ಪದವಿಯು ಸದ್ಯದಲ್ಲೇ ಆರಂಭಗೊಳ್ಳಲಿದ್ದು ಆನ್‌ಲೈನ್ ಹಾಗೂ ಆಫ್‌ಲೈನ್ ಪರೀಕ್ಷೆಗಳು ನಡೆಯಲಿವೆ. ತರಗತಿಗಳು ಸೋಮವಾರದಿಂದ ಶುಕ್ರವಾರದವರೆಗೆ ಸಂಜೆ 5ರಿಂದ ರಾತ್ರಿ 9ರ ವರೆಗೆ ನಡೆಯಲಿವೆ.

Udayavani, Date: 20/10/22. p, no - 03